# All India Radio: Bangalore
# Regional Bulletin In Kannada
# 21.03.2026 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಮಾದಕ ದ್ರವ್ಯ ಮಾರಾಟ ತಡೆಗೆ ರಾಜ್ಯ ಸರ್ಕಾರದಿಂದ ಕಟ್ಟುನಿಟ್ಟಿನ ಕ್ರಮ- ಗೃಹ ಸಚಿವ ಡಾ.ಜಿ.ಪರಮೇಶ್ವರ್
2. ರಾಜ್ಯಾದ್ಯಂತ ಇಂದು ಮುಸ್ಲಿಂ ಬಾಂಧವರಿಂದ ಈದ್ ಉಲ್ ಫಿತ್ರ ಆಚರಣೆ ; ಗಣ್ಯರ ಶುಭಾಶಯ
3. ದಕ್ಷಿಣ ರಾಜ್ಯಗಳಿಗಾಗಿ ಅಟಲ್ ನಾವಿನ್ಯತಾ ಮಿಷನ್ ನಿಂದ ಇದೇ ಮಂಗಳವಾರ ಬೆಂಗಳೂರಿನಲ್ಲಿ ಪ್ರಾದೇಶಿಕ ಸಂವಾದ ಕಾರ್ಯಕ್ರಮ
4. ಮಂಗಳೂರಿನಲ್ಲಿ ಇದೇ ೨೪ರಿಂದ ರಾಷ್ಟ್ರಮಟ್ಟದ ಸೀನಿಯರ್ ಪವರ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್ ಆಯೋಜನೆ

<><><><>

ಮಾದಕ ದ್ರವ್ಯ ಮಾರಾಟ ತಡೆಗೆ ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಇಂದು ಸುದ್ದಿ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯ ಪೊಲೀಸ್ ಇಲಾಖೆಯ ಆಧುನೀಕರಣ ಹಾಗೂ ಸಾಮಾಜಿಕ ಪಿಡುಗು-ಮಾದಕ ದ್ರವ್ಯ ಮಾರಾಟವನ್ನು ಸಂಪೂರ್ಣವಾಗಿ ಮಟ್ಟ ಹಾಕಲು ಸರ್ಕಾರ ಕ್ರಮಕ್ಕೆ ಮುಂದಾಗಿದೆ ಎಂದರು. ಸೈಬರ್ ಕ್ರೈಂ ಹಾವಳಿಯನ್ನು ನಿಯಂತ್ರಿಸಲು ಹಾಗೂ ಕಾನೂನು ಮತ್ತು ಸುವ್ಯವಸ್ಥೆಯನ್ನು ನಿರ್ವಹಿಸುವಲ್ಲಿ ಪೊಲೀಸ್ ಪಡೆಯ ದಕ್ಷತೆಯನ್ನು ಹೆಚ್ಚಿಸಲು ರಾಜ್ಯ ಗೃಹ ಇಲಾಖೆಯು ಆದ್ಯತೆ ಮೇಲೆ ಗಮನ ನೀಡುತ್ತಿದೆ ಎಂದು ಗೃಹ ಸಚಿವರು ತಿಳಿಸಿದ್ದಾರೆ.

<><><><>

ಉಪವಾಸ ಮಾಸಾಚರಣೆ ನಂತರ ಮುಸ್ಲಿಂ ಬಾಂಧವರು ರಾಜ್ಯಾದ್ಯಂತ ಈದ್ ಉಲ್ ಫಿತ್ರ ಹಬ್ಬವನ್ನು ಇಂದು ಸಡಗರ, ಸಂಭ್ರಮದಿಂದ ಆಚರಿಸುತ್ತಿದ್ದಾರೆ. ಸಾಮೂಹಿಕ ಪ್ರಾರ್ಥನೆ ನಂತರ ಸಿಹಿ ಹಾಗೂ ಶುಭಾಶಯ ವಿನಿಮಯ ಮಾಡಿಕೊಳ್ಳುತ್ತಿರುವ ದೃಶ್ಯ ಎಲ್ಲೆಡೆ ಸಾಮಾನ್ಯವಾಗಿದೆ. ಕಳೆದ ಒಂದು ತಿಂಗಳಿಂದ ಆಚರಿಸಿಕೊಂಡು ಬಂದಿರುವ ಉಪವಾಸ ವ್ರತ-ರೋಜಾ, ಈ ರಂಜಾನ್ ಹಬ್ಬದೊಂದಿಗೆ ಮುಕ್ತಾಯವಾಗುತ್ತದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು, ಈದ್ ಉಲ್-ಫಿತ್ರ ಸಂದರ್ಭದಲ್ಲಿ ಸಂದೇಶ ನೀಡಿ, ಹಬ್ಬವನ್ನು ರಾಷ್ಟ್ರದಾದ್ಯಂತ ಆಚರಿಸುತ್ತಿರುವ ಎಲ್ಲಾ ನಾಗರಿಕರಿಗೆ ದೇವರು ಸಂತೋಷ, ಶಾಂತಿ ಮತ್ತು ಸಮೃದ್ಧಿಯನ್ನು ತರಲಿ; ಸಹಾನುಭೂತಿ, ಉದಾರತೆ ಹಾಗೂ ಏಕತೆಯ ಮೌಲ್ಯಗಳ ಪರಿಪಾಲನೆ ಮುಂದುವರಿಯಲಿ ಎಂದು ತಿಳಿಸಿದ್ದಾರೆ. ಬೆಂಗಳೂರಿನ ಮಿಲ್ಲರ್ಸ್ ರಸ್ತೆಯ ಮಸ್ಜಿದ್ - ಈ - ಖಾದ್ರಿಯಾದಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪಾಲ್ಗೊಂಡು, ರಾಜ್ಯದ ಮುಸ್ಲಿಂ ಬಾಂಧವರಿಗೆ ರಂಜಾನ್ ಹಬ್ಬದ ಶುಭ ಹಾರೈಸಿದರು. ಮಾನವಕುಲದ ಒಳಿತಿಗಾಗಿ ಸರ್ವರೂ ಪ್ರಾರ್ಥಿಸುವುದು ಅತ್ಯಂತ ಅವಶ್ಯ. ಮಾನವೀಯತೆಯಿಂದ ಪರಸ್ಪರ ಪ್ರೀತಿ - ವಿಶ್ವಾಸದಿಂದ ಬಾಳುವುದು ಮುಖ್ಯ. ಭಾರತ ದೇಶ ವಿವಿಧ ಜಾತಿ ಸಂಸ್ಕೃತಿಗಳಿಂದ ಕೂಡಿದೆ. ವಿವಿಧತೆಯಲ್ಲಿ ಏಕತೆಯಿರುವ ನಮ್ಮ ದೇಶದಲ್ಲಿ ಎಲ್ಲರೂ ಒಟ್ಟಾಗಿ ಬಾಳಬೇಕು. ಎಲ್ಲ ಧರ್ಮಗಳೂ ಪ್ರೀತಿಯನ್ನು ಬೋಧಿಸುತ್ತವೆ. ಇದನ್ನು ಅರಿತು

ಬಾಳಿದರೆ ಸಮಾಜದಲ್ಲಿ ಶಾಂತಿ - ಸೌಹಾರ್ದತೆ ನೆಲೆಸಲು ಸಾಧ್ಯ ಎಂದು ಮುಖ್ಯಮಂತ್ರಿಯವರು ಹೇಳಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಈದ್ ಉಲ್ ಫಿತ್ರ ಸಂತೋಷ ಹಾಗೂ ಸಮೃದ್ಧಿ ತರಲೆಂದು ಹಾರೈಸಿದ್ದಾರೆ. ಈದ್ ಉಲ್ ಫಿತ್ರ ಆಚರಣೆ ಕುರಿತಂತೆ, ವಿವಿಧ ಜಿಲ್ಲಾ ಕೇಂದ್ರಗಳಿಂದ ಬಂದ ವರದಿ ಈ ರೀತಿ ಇದೆ. ಹಾವೇರಿಯ ಈದ್ಗಾ ಮಸೀದಿ ಸೇರಿದಂತೆ ಜಿಲ್ಲೆಯ ವಿವಿಧ ಮಸೀದಿಗಳಲ್ಲಿ ಸಾವಿರಾರು ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಪವಿತ್ರ ರಂಜಾನ್ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು. ಬೆಳಿಗ್ಗೆ ಕುಟುಂಬದ ಸದಸ್ಯರೆಲ್ಲರೂ ಹೊಸ ಉಡುಪುಗಳನ್ನು ಧರಿಸಿ ಮಹಿಳೆಯರು ಮನೆಯಲ್ಲಿಯೇ ಪ್ರಾರ್ಥನೆ ಸಲ್ಲಿಸಿದರೆ, ಪುರುಷರು ಈದ್ಗಾ ಮೈದಾನದಲ್ಲಿ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಶ್ರದ್ಧಾ ಭಕ್ತಿಯಿಂದ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಸಾಮೂಹಿಕ ಪ್ರಾರ್ಥನೆಯ ನಂತರ ಪರಸ್ಪರ ರಂಜಾನ್ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಇಂತಹ ಪವಿತ್ರ ರಂಜಾನ್ ಹಬ್ಬದ ಧಾರ್ಮಿಕ ಆಚರಣೆಯಲ್ಲಿ ಪಾಲ್ಗೊಳ್ಳುವುದರಿಂದ ದೇವರ ಕುರಿತು ಏಕಾಗ್ರತೆ ಮೂಡಿಲು ಸಾಧ್ಯ ಎಂಬುದು ಮುಸ್ಲಿಂ ಬಾಂಧವರ ನಂಬಿಕೆಯಾಗಿದೆ. ಕೋಲಾರ ಜಿಲ್ಲೆಯಾದ್ಯಂತ ರಂಜಾನ್ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸುತ್ತಿದ್ದಾರೆ. ಕೋಲಾರ ನಗರದ ಕ್ಲಾಕ್ ಟವರ್ ಬಳಿಯಿರುವ ಈದ್ಗಾ ಮಸೀದಿ, ಕೋಲಾರ ವೇಮಗಲ್ ರಸ್ತೆಯಲ್ಲಿರುವ ಸಂಗೊಂಡಹಳ್ಳಿ ಈದ್ಗಾ ಮೈದಾನ ಸೇರಿದಂತೆ ಜಿಲ್ಲೆಯ ವಿವಿಧ ಮಸೀದಿಗಳಲ್ಲಿ  ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಕೋಲಾರದ ಶಾಸಕ ಕೊತ್ತೂರು ಮಂಜುನಾಥ್ ಹಾಗೂ ವಿಧಾನ ಪರಿಷತ್ ಸದಸ್ಯ ಎಂ.ಎಲ್ ಅನಿಲ್ ಕುಮಾರ್ ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗಿಯಾಗಿ ಹಬ್ಬದ ಶುಭಾಶಯಗಳನ್ನು ತಿಳಿಸಿದರು. ಬಳ್ಳಾರಿ ನಗರ ಹೊರ ವಲಯದ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಹಬ್ಬಕ್ಕೆ ಹೊಸ ಬಟ್ಟೆಗಳನ್ನು ಧರಿಸಿ ಪ್ರಾರ್ಥನೆಗೆ ಈದ್ಗಾ ಮೈದಾನಕ್ಕೆ ಆಗಮಿಸಿದ್ದರು. ಪ್ರಾರ್ಥನೆಯಲ್ಲಿ  ಸಂಸದ ಈ ತುಕರಾಂ ಸೇರಿದಂತೆ  ಹಲವು ಜನಪ್ರತಿನಿಧಿಗಳು ಪಾಲ್ಗೊಂಡು  ಮುಸ್ಲಿಂ ಸಮುದಾಯದ ಜನತೆಗೆ ಪರಸ್ಪರ ಶುಭಾಶಯ ಕೋರಿದರು. ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಮುಸ್ಲಿಂ ಬಾಂದವರು ರಂಜಾನ್ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಿಸುತ್ತಿದ್ದಾರೆ. ಹಬ್ಬದ ಅಂಗವಾಗಿ ಚಿಕ್ಕಮಗಳೂರು ನಗರದ ವಿಜಯಪುರ ಬಡಾವಣೆ ದರ್ಗಾದ ಎದುರು ಸಾವಿರಾರು ಮುಸ್ಲಿಮರು ಆಗಮಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಿದ್ದರು. ಜಿಲ್ಲೆಯ ಮೂಡಿಗೆರೆ, ಬಾಳೆಹೊನ್ನೂರು, ಕಡೂರು ಸೇರಿದಂತೆ ಹಲವೆಡೆ ಹಬ್ಬದ ಅಂಗವಾಗಿ ಮಸೀದಿಗಳಲ್ಲಿ ದವಸ ಧಾನ್ಯ, ವಸ್ತ್ರಗಳ ಧಾನ, ಹಾಗೂ ವಿಶೇಷ ಪ್ರಾರ್ಥನೆಯನ್ನು ಇಂದು ಹಮ್ಮಿಕೊಳ್ಳಲಾಗಿದೆ. ಚಾಮರಾಜನಗರ ಜಿಲ್ಲೆಯ ಚಾಮರಾಜನಗರ, ಕೊಳ್ಳೇಗಾಲ, ಗುಂಡ್ಲುಪೇಟೆ ಪಟ್ಟಣದ ಈದ್ಗಾ ಮೈದಾನಗಳಲ್ಲಿ ಸಾವಿರಾರು ಸಂಖ್ಯೆಯಲ್ಲಿ ಮುಸ್ಲಿಂ ಸಮುದಾಯದವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಚಾಮರಾಜನಗರ ಶಾಸಕ ಸಿ.ಪುಟ್ಟರಂಗಶೆಟ್ಟಿ, ಗುಂಡ್ಲುಪೇಟೆ ಶಾಸಕ ಗಣೇಶ್ ಪ್ರಸಾದ್, ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ ತಾಲೂಕು ಕೇಂದ್ರಗಳಲ್ಲಿನ ಈದ್ಗಾ ಮೈದಾನಕ್ಕೆ ತೆರಳಿ ಸಿಹಿ ಹಂಚಿ ಈದ್ ಉಲ್ ಫಿತ್ರ ಶುಭಾಶಯ ಕೋರಿದರು. ಚಿಕ್ಕಬಳ್ಳಾಪುರ ನಗರದ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ರಂಜಾನ್ ಪ್ರಯುಕ್ತ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ, ನಂತರ ಹಬ್ಬದ ಶುಭಾಶಯಗಳನ್ನು ಪರಸ್ಪರ ಹಂಚಿಕೊಂಡರು. ಗದಗ ಬೆಟಗೇರಿ ಅವಳಿ ನಗರದ ಈದ್ಗಾ ಮೈದಾನ ಸೇರಿದಂತೆ ಡಂಬಳ ನಾಕಾ ಈದ್ಗಾ ಮೈದಾನದಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಮುಸ್ಲಿಂ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.  ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಅವರು ಡಂಬಳ ನಾಕಾ ಈದ್ಗಾ ಮೈದಾನದಲ್ಲಿ ಜರುಗಿದ ಸಾಮೂಹಿಕ

ಪ್ರಾರ್ಥನೆಯಲ್ಲಿ ಪಾಲ್ಗೊಂಡು, ಮುಸ್ಲಿಂ ಬಾಂಧವರಿಗೆ ಹಬ್ಬದ ಶುಭಕೋರಿದರು. ಐತಿಹಾಸಿಕ ಆದಿಲ್ ಶಾಹಿ ನಗರಿ ವಿಜಯಪುರದಲ್ಲಿ ಮುಸ್ಲಿಂ ಬಾಂಧವರು ರಂಜಾನ್ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಿದರು. ನಗರದ ವಾಟರ್ ಟ್ಯಾಂಕ್ ಹತ್ತಿರ ಇರುವ ದಖನಿ ಮೈದಾನ ಸೇರಿದಂತೆ ನಗರದ ವಿವಿಧ ಈದ್ಗಾ ಮೈದಾನಗಳಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಸಾಮೂಹಿಕ ಪ್ರಾರ್ಥನೆಗಳು ಜರುಗಿದವು. ಕೇಂದ್ರ ಬಸ್ ನಿಲ್ದಾಣದ ಹತ್ತಿರವಿರುವ ಜೋಡ ಗುಮ್ಮಟ, ಬೃಹತ್ ಜುಮ್ಮಾ ಮಸ್ಜಿದ್‌ನಲ್ಲಿ ಸಾಮೂಹಿಕ ಪ್ರಾರ್ಥನೆಗಳು ನಡೆದವು. ಹೊಸ ಬಟ್ಟೆ ಧರಿಸಿಕೊಂಡು, ಸುರಕುಂಬ ಹಂಚಿ ಶುಭಾಶಯ ಕೋರುವ ದೃಶ್ಯ ಜಿಲ್ಲೆಯಾದ್ಯಂತ ಸಾಮಾನ್ಯವಾಗಿತ್ತು.

<><><>

ಭಾರತ ಸರ್ಕಾರದ ಅಟಲ್ ನಾವಿನ್ಯತಾ ಮಿಷನ್ ನಾವಿನ್ಯತೆ ಮತ್ತು ಉದ್ಯಮಶೀಲ ಪರಿಸರ ಬಲಪಡಿಸುವ ಕುರಿತಂತೆ ದಕ್ಷಿಣದ ರಾಜ್ಯಗಳಿಗಾಗಿ ಇದೇ ಮಂಗಳವಾರ ಬೆಂಗಳೂರಿನಲ್ಲಿ ಪ್ರಾದೇಶಿಕ ಸಂವಾದ ಕಾರ್ಯಕ್ರಮ ಹಮ್ಮಿಕೊಂಡಿದೆ. ಕರ್ನಾಟಕ, ಆಂಧ್ರಪ್ರದೇಶ, ಕೇರಳ, ತಮಿಳುನಾಡು, ತೆಲಂಗಾಣ ರಾಜ್ಯಗಳ ಹಾಗೂ ಪುದುಚೇರಿ ಕೇಂದ್ರಾಡಳಿತ ಪ್ರದೇಶಗಳ ಪ್ರತಿನಿಧಿಗಳು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಷ್ಟ್ರೀಯ ಅಟಲ್ ನಾವಿನ್ಯತಾ ಮಿಷನ್‌ನ ಗುರಿಸಾಧನೆಗಾಗಿ ಪ್ರಾದೇಶಿಕ ಸಹಯೋಗ ಬಲಪಡಿಸುವುದು ಸಂವಾದ ಕಾರ್ಯಕ್ರಮದ ಉದ್ದೇಶವಾಗಿದೆ. ರಾಜ್ಯ ಸರ್ಕಾರಗಳ ಅಧಿಕಾರಿಗಳು, ನವೋದ್ಯಮ ಮಿಷನ್, ಅಟಲ್ ಇಂಕ್ಯೂಬೇಶನ್ ಕೇಂದ್ರಗಳು, ಅಟಲ್ ಸಮುದಾಯ ಆವಿಷ್ಕಾರ ಕೇಂದ್ರಗಳ ಪ್ರತಿನಿಧಿಗಳು ಹಾಗೂ ಕೈಗಾರಿಕೆ ಮತ್ತು ಶೈಕ್ಷಣಿಕ ಕ್ಷೇತ್ರಗಳ ಪ್ರತಿನಿಧಿಗಳು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ. ಜ್ಞಾನ ಹಂಚಿಕೆ, ಸಾಮರ್ಥ್ಯ ನಿರ್ಮಾಣ, ಕಾರ್ಯತಂತ್ರ ಮತ್ತು ಸಹಭಾಗಿತ್ವ ಕುರಿತಂತೆ ಪ್ರತಿನಿಧಿಗಳು ವಿಚಾರ-ವಿನಿಮಯ ನಡೆಸಲಿದ್ದಾರೆ. ಜೈವಿಕ ತಂತ್ರಜ್ಞಾನ, ಕೃಷಿ, ನವೀಕರಿಸಬಹುದಾದ ಇಂಧನ, ಎಲೆಕ್ಟ್ರಾನಿಕ್ಸ್, ಕೃತಕ ಬುದ್ಧಿಮತ್ತೆ ಮೊದಲಾದ ಕ್ಷೇತ್ರಗಳಲ್ಲಿನ ಆವಿಷ್ಕಾರಗಳನ್ನು ಸಂವಾದ ಕಾರ್ಯಕ್ರಮ ಸಾದರಪಡಿಸುತ್ತದೆ.

<><><>

ಬೆಂಗಳೂರು ಜಲಮಂಡಳಿ ವ್ಯಾಪ್ತಿಯ ಗ್ರಾಹಕರಿಗಾಗಿ ಸರ್ಕಾರವು 'ಒಂದು ಬಾರಿ ಪರಿಹಾರ ಯೋಜನೆ' ಯನ್ನು ಜಾರಿಗೆ ತಂದಿದೆ. ಏಪ್ರಿಲ್‌ನಿಂದ ಜೂನ್ ರವರೆಗೆ ಈ ಯೋಜನೆ ಚಾಲ್ತಿಯಲ್ಲಿರುತ್ತದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><><>

ಉಪಚುನಾವಣೆಯ ಮಾದರಿ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಬಾಗಲಕೋಟೆ ಜಿಲ್ಲೆ ಇಳಕಲ್ ತಾಲೂಕಿನ ಗುಗ್ಗಲಮರಿ ಚೆಕ್‌ಪೋಸ್ಟ್‌ನಲ್ಲಿ ಇಂದು ವಾಹನ ತಪಾಸಣೆ ವೇಳೆ ದಾಖಲೆ ಇಲ್ಲದ ೩ ಲಕ್ಷ ೩೦ ಸಾವಿರ ರೂಪಾಯಿ ನಗದನ್ನು ಜಪ್ತಿ ಮಾಡಲಾಗಿದೆ. ಎಸ್‌ಎಸ್‌ಟಿ ತಂಡದ ಅಧಿಕಾರಿ ಎಂ.ಎಚ್. ಕೊತ್ತವಾಲ ಕಾರ್ಯಾಚರಣೆ ನಡೆಸಿ ಹಣವನ್ನು ವಶಪಡಿಸಿಕೊಂಡಿದ್ದಾರೆ. ಚುನಾವಣಾ ಆಯೋಗದ ನಿರ್ದೇಶನದಂತೆ ಜಪ್ತಿಯಾದ ಹಣವನ್ನು ಉಪ ಖಜಾನೆಯಲ್ಲಿ ಠೇವಣಿ ಮಾಡಲಾಗಿದೆ ಎಂದು ಉಪಚುನಾವಣೆ ಸಹಾಯಕ ಚುನಾವಣಾಧಿಕಾರಿ ಅಮರೇಶ ಪಮ್ಮಾರ ತಿಳಿಸಿದ್ದಾರೆ.

<><><>

ಚಿಕ್ಕಬಳ್ಳಾಪುರ ಜಿಲ್ಲೆ ಗುಡಿಬಂಡೆ ಪಟ್ಟಣದ ಮೂರು ಕಡೆಗಳಲ್ಲಿ ತಹಸೀಲ್ದಾರ್ ನೇತೃತ್ವದ ಅಧಿಕಾರಿಗಳ ತಂಡ ನಿನ್ನೆ ಕಾರ್ಯಾಚರಣೆ ನಡೆಸಿ ಅಕ್ರಮ ದಾಸ್ತಾನು ಮಾಡಿದ್ದ ೭೪ ಗೃಹಬಳಕೆ ಸಿಲಿಂಡರುಗಳನ್ನು ವಶಕ್ಕೆ ಪಡೆದಿದೆ. ತಂಡ ವಿವಿಧ ಹೋಟೆಲ್, ಡಾಬಾ, ರೆಸ್ಟೋರೆಂಟ್, ಬೇಕರಿ ಮತ್ತಿತರ ಕಡೆಗಳಲ್ಲಿ ಪರಿಶೀಲನೆ ನಡೆಸಿತು.

<><><>

ಮಂಗಳೂರಿನಲ್ಲಿ ಇದೇ ೨೪ರಿಂದ ೨೮ರವರೆಗೆ ರಾಷ್ಟ್ರ ಮಟ್ಟದ ಸೀನಿಯರ್ ಕ್ಲಾಸಿಕ್ ಪವರ್‌ಲಿಫ್ಟಿಂಗ್ ಚಾಂಪಿಯನ್ ಶಿಪ್ ಆಯೋಜಿಸಲಾಗಿದೆ. ಕರ್ನಾಟಕ ಪವರ್‌ಲಿಫ್ಟಿಂಗ್ ಅಸೋಸಿಯೇಶನ್ ಆಶ್ರಯದಲ್ಲಿ, ಕಶಾರ್ಪ್ ಫಿಟ್ನೆಸ್ ವತಿಯಿಂದ ಈ ಚಾಂಪಿಯನ್ ಶಿಪ್ ನಡೆಸಲಾಗುತ್ತಿದೆ ಎಂದು ಪವರ್ ಲಿಫ್ಟಿಂಗ್ ಇಂಡಿಯಾ ಅಧ್ಯಕ್ಷ ಸತೀಶ್ ಕುಮಾರ್ ಕುದ್ರೋಳಿ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಐದು ದಿನಗಳ ಕಾಲ ನಡೆಯಲಿರುವ ರಾಷ್ಟ್ರೀಯ ಕ್ರೀಡಾ ಕೂಟದಲ್ಲಿ ದೇಶದ ವಿವಿಧ ರಾಜ್ಯಗಳಿಂದ ೩೦೦ಕ್ಕೂ ಹೆಚ್ಚು ಪುರುಷ ಹಾಗೂ ಮಹಿಳಾ ಪವರ್‌ಲಿಫ್ಟರ್‌ಗಳು ಭಾಗವಹಿಸಲಿದ್ದಾರೆ. ಸ್ಪರ್ಧೆಯಲ್ಲಿ ಸ್ಕ್ವಾಟ್ ಬೆಂಚ್ ಪ್ರೆಸ್ ಮತ್ತು ಡೆಡ್‌ಲಿಫ್ಟ್ ವಿಭಾಗಗಳಲ್ಲಿ ಕ್ರೀಡಾಪಟುಗಳು ತಮ್ಮ ಶಕ್ತಿ ಹಾಗೂ ಸಾಮರ್ಥ್ಯವನ್ನು ಪ್ರದರ್ಶಿಸಲಿದ್ದಾರೆ ಎಂದರು. ಈ ಚಾಂಪಿಯನ್‌ಶಿಪ್ ನಲ್ಲಿ ಚಿನ್ನದ ಪದಕ ವಿಜೇತರಾಗುವ ಪವರ್ ಲಿಫ್ಟರ್‌ಗಳು ಜೂನ್ ತಿಂಗಳಿನಲ್ಲಿ ಲಿಥುವೇನಿಯಾದಲ್ಲಿ ನಡೆಯಲಿರುವ ವಿಶ್ವ ಪವರ್ ಲಿಫ್ಟಿಂಗ್ ಚಾಂಪಿಯನ್ ಶಿಪ್ ನಲ್ಲಿ ಭಾರತವನ್ನು ಪ್ರತಿನಿಧಿಸುವ ಅವಕಾಶ ಪಡೆಯಲಿದ್ದಾರೆ ಎಂದು ಅವರು ತಿಳಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>